**All India Radio: Bangalore**
**National Bulletin In Kannada**
**19.02.2025 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**19.02.2025 1.10 p.m.**

***************

ಮುಖ್ಯಾಂಶಗಳು

೧. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ ಐದು ರಾಜ್ಯಗಳಿಗೆ ೧ ಸಾವಿರದ ೫೫೪ ಕೋಟಿ ರೂಪಾಯಿ ನೆರವಿಗೆ ಕೇಂದ್ರ ಅನುಮೋದನೆ

೨. ಇಂದು ಛತ್ರಪತಿ ಶಿವಾಜಿ ಮಹಾರಾಜರ ೩೯೫ನೇ ಜನ್ಮ ದಿನ; ಪ್ರಧಾನಿ ಸೇರಿದಂತೆ ಗಣ್ಯರಿಂದ ಗೌರವ ನಮನ

೩. ಇಂದು ನೂತನ ಮುಖ್ಯ ಚುನಾವಣಾ ಆಯುಕ್ತರಾಗಿ ಜ್ಞಾನೇಶ್ ಕುಮಾರ್ ಅಧಿಕಾರ ಸ್ವೀಕಾರ

೪. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ದಕ್ಷಿಣ ಆಫ್ರಿಕಾಕ್ಕೆ ಭೇಟಿ; ನಾಳೆ ಜಿ-೨೦ ಸಭೆಯಲ್ಲಿ ಭಾಗಿ

೫. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ವಡೋದರಾದಲ್ಲಿಂದು ಯುಪಿ ವಾರಿಯರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವೆ ಹಣಾಹಣಿ

***************

ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿ-ಎನ್‌ಡಿಆರ್‌ಎಫ್ ನಿಂದ- ಕಳೆದ ವರ್ಷದಲ್ಲಿ ಸಂಭವಿಸಿದ ಪ್ರವಾಹ, ಭೂಕುಸಿತ ಮತ್ತು ಚಂಡಮಾರುತದಂತಹ ನೈಸರ್ಗಿಕ ವಿಕೋಪಗಳಿಂದ ಹಾನಿಗೊಳಗಾದ ಐದು ರಾಜ್ಯಗಳಿಗೆ ಒಂದು ಸಾವಿರದ ೫೫೪ ಕೋಟಿ ರೂಪಾಯಿಗಳಿಗೂ ಹೆಚ್ಚಿನ ನೆರವನ್ನು ಕೇಂದ್ರ ಸರ್ಕಾರ ಅನುಮೋದಿಸಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ, ಅಧ್ಯಕ್ಷತೆಯ ಉನ್ನತ ಮಟ್ಟದ ಸಮಿತಿಯು, ಎನ್‌ಡಿಆರ್‌ಎಫ್ ನಿಂದ ಆಂಧ್ರಪ್ರದೇಶಕ್ಕೆ ೬೦೮ ಕೋಟಿ ರೂಪಾಯಿ, ನಾಗಾಲ್ಯಾಂಡ್‌ಗೆ ೧೭೦ ಕೋಟಿ, ಒಡಿಶಾಗೆ ೨೫೫ ಕೋಟಿ, ತೆಲಂಗಾಣಕ್ಕೆ ೨೩೧ ಕೋಟಿ ಮತ್ತು ತ್ರಿಪುರಕ್ಕೆ ೨೮೮ ಕೋಟಿ ರೂಪಾಯಿ ಅನುದಾನವನ್ನು ಅನುಮೋದಿಸಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

ಈ ಹೆಚ್ಚುವರಿ ಬೆಂಬಲವು ರಾಜ್ಯ ವಿಪತ್ತು ನಿರ್ವಹಣಾ ನಿಧಿ-ಎಸ್‌ಡಿಆರ್‌ಎಫ್ ಅಡಿಯಲ್ಲಿ ಕೇಂದ್ರವು ಈಗಾಗಲೇ ರಾಜ್ಯಗಳಿಗೆ ಹಂಚಿಕೆ ಮಾಡಿರುವ ನಿಧಿಯಿಂದ ಪ್ರತ್ಯೇಕವಾಗಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

೨೦೨೪-೨೫ರ ಹಣಕಾಸು ವರ್ಷದಲ್ಲಿ, ಕೇಂದ್ರ ಸರ್ಕಾರವು ಎಸ್‌ಡಿಆರ್‌ಎಫ್ ಅಡಿಯಲ್ಲಿ ೨೭ ರಾಜ್ಯಗಳಿಗೆ ೧೮ ಸಾವಿರದ ೩೨೨ ಕೋಟಿ ರೂಪಾಯಿಗಳಿಗೂ ಹೆಚ್ಚು ಮತ್ತು ಎನ್‌ಡಿಆರ್‌ಎಫ್ ನಿಂದ ೧೮ ರಾಜ್ಯಗಳಿಗೆ ನಾಲ್ಕು ಸಾವಿರದ ೮೦೮ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ.

****************

ಛತ್ರಪತಿ ಶಿವಾಜಿ ಮಹಾರಾಜರ ೩೯೫ ನೇ ಜನ್ಮ ದಿನಾಚರಣೆಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ೧೬೩೦ ರಲ್ಲಿ ಈ ದಿನದಂದು ಮಹಾರಾಷ್ಟ್ರದ ಪುಣೆ ಜಿಲ್ಲೆಯ ಶಿವನೇರಿ ಕೋಟೆಯಲ್ಲಿ ಜನಿಸಿದ ಛತ್ರಪತಿ ಶಿವಾಜಿ ಮರಾಠಾ ಸಾಮ್ರಾಜ್ಯದ ಅಡಿಪಾಯವನ್ನು ಹಾಕಿ, ಮೊಘಲ್ ಆಳ್ವಿಕೆಗೆ ಸವಾಲು ಹಾಕಿದರು.

ಅವರ ಪ್ರಬಲ ನಾಯಕತ್ವ, ಸೇನಾ ಕುಶಾಗ್ರಮತಿ, ಶೌರ್ಯ, ಬುದ್ಧಿವಂತಿಕೆ ಮತ್ತು ನಿರಂತರ ಸ್ವರಾಜ್ಯದ ಪರಿಕಲ್ಪನೆಯು ವ್ಯಾಪಕ ಮೆಚ್ಚುಗೆ ಪಾತ್ರವಾಗಿದೆ.

ಛತ್ರಪತಿ ಶಿವಾಜಿ ಅವರ ಜಯಂತಿಯಂದು ಪ್ರಧಾನಿ ನರೇಂದ್ರ ಮೋದಿ ಛತ್ರಪತಿ ಶಿವಾಜಿ ಅವರಿಗೆ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ, ಛತ್ರಪತಿ ಶಿವಾಜಿಯ ಶೌರ್ಯ ಮತ್ತು ದೂರದೃಷ್ಟಿಯ ನಾಯಕತ್ವವು ಸ್ವರಾಜ್ಯಕ್ಕೆ ಅಡಿಪಾಯ ಹಾಕಿತು. ಭವಿಷ್ಯದ ಪೀಳಿಗೆಗಳು ಧೈರ್ಯ ಮತ್ತು ನ್ಯಾಯದ ಮೌಲ್ಯಗಳನ್ನು ಎತ್ತಿಹಿಡಿಯಲು ಪ್ರೇರೇಪಿಸಿತು ಎಂದು ಹೇಳಿದ್ದಾರೆ.

ಶಿವಾಜಿ ಮಹಾರಾಜರು ಬಲವಾದ, ಸ್ವಾವಲಂಬಿ ಮತ್ತು ಸಮೃದ್ಧ ರಾಷ್ಟ್ರವನ್ನು ನಿರ್ಮಿಸುವಲ್ಲಿ ನಾಗರಿಕರಿಗೆ ಸದಾ ಪ್ರೇರಣೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೬ ಸೆಕೆಂಡ್)

****************

ಗ್ರಾಮೀಣ ನಾಗರಿಕರ ಜೀವನವನ್ನು ಹೆಚ್ಚು ಆರಾಮದಾಯಕವಾಗಿಸಲು ಕೇಂದ್ರ ಸರ್ಕಾರ, ಹಲವಾರು ಕ್ರಾಂತಿಕಾರಿ ಯೋಜನೆಗಳನ್ನು ಕೈಗೊಂಡಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಆಫ್ರಿಕನ್-ಏಷ್ಯನ್ ಗ್ರಾಮೀಣ ಅಭಿವೃದ್ಧಿ ಸಂಸ್ಥೆ- ಎಎಆರ್‌ಡಿಒ, ಕಾರ್ಯಕಾರಿ ಸಮಿತಿಯ ೭೭ನೇ ಅಧಿವೇಶನವನ್ನು ಉದ್ಘಾಟಿಸಿ, ಮಾತನಾಡಿದ ಅವರು, ಎಎಆರ್‌ಡಿಒ ದ ಬಹುಪಕ್ಷೀಯ ವೇದಿಕೆಯ ಮೂಲಕ ಭಾರತ ಜ್ಞಾನ, ತಾಂತ್ರಿಕ, ಪರಿಣತಿ ಮತ್ತು ಯಶಸ್ವಿ ನೀತಿಗಳು ಮತ್ತು ಕಾರ್ಯಕ್ರಮಗಳನ್ನು ವಿನಿಮಯವನ್ನು ಮುಂದುವರಿಸಲಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭರವಸೆ ನೀಡಿದರು.

ಎಎಆರ್‌ಡಿಒ ಗೆ ಭಾರತವು ತನ್ನ ಅಚಲ ಬೆಂಬಲ ಮತ್ತು ನೆರವಿನೊಂದಿಗೆ ಗ್ರಾಮೀಣ ಸಮುದಾಯವನ್ನು ಸಬಲೀಕರಣಗೊಳಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯೆ', 'ಪ್ರಧಾನಮಂತ್ರಿ ಗ್ರಾಮೀಣ ಸಡಕ್ ಯೋಜನೆ', 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನ ಮತ್ತು 'ಲಖ್‌ಪತಿ ದೀದಿ ಯೋಜನೆ' ಮುಂತಾದ ಯೋಜನೆಗಳ ಮಹತ್ವ ತಿಳಿಸಿದರು.

ಹಿಂದೆ ಭಾರತ ಆಹಾರಕ್ಕಾಗಿ ಇತರ ದೇಶಗಳನ್ನು ಅವಲಂಬಿಸಿತ್ತು. ಆದರೆ ಇಂದು ದೇಶವು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗಿದೆ ಮಾತ್ರವಲ್ಲದೆ ಇತರ ರಾಷ್ಟ್ರಗಳಿಗೆ ಸಹಾಯ ಮಾಡುತ್ತಿದೆ ಎಂದು ಸಚಿವರು ಹೇಳಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಮೂಲಕ ಸುಮಾರು ೯೦ ಲಕ್ಷ ಸ್ವಸಹಾಯ ಗುಂಪುಗಳಲ್ಲಿ ಸುಮಾರು ೧೦ ಕೋಟಿ ಮಹಿಳೆಯರನ್ನು ಸೇರಿಸಲಾಗಿದೆ ಮತ್ತು ಅವರಿಗೆ ೫೦ ಸಾವಿರ ಕೋಟಿಗೂ ಹೆಚ್ಚು ಆರ್ಥಿಕ ಸಹಾಯವನ್ನು ನೀಡಲಾಗಿದೆ ಎಂದು ಅವರು ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಸುಮಾರು ೧ ಕೋಟಿ ೨೫ ಲಕ್ಷ ಮಹಿಳೆಯರು ಲಖ್‌ಪತಿ ದೀದಿ ಯೋಜನೆಯಡಿ ಪ್ರಯೋಜ ಪಡೆಯುತ್ತಿದ್ದಾರೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದ್ದಾರೆ.

***************

ನವದೆಹಲಿಯಲ್ಲಿ ನೂತನ ಮುಖ್ಯ ಚುನಾವಣಾ ಆಯುಕ್ತರಾಗಿ ಜ್ಞಾನೇಶ್ ಕುಮಾರ್ ಇಂದು ಅಧಿಕಾರ ವಹಿಸಿಕೊಂಡರು.

ರಾಜೀವ್ ಕುಮಾರ್ ಅವರ ಸ್ಥಾನವನ್ನು ಜ್ಞಾನೇಶ್ ಕುಮಾರ್ ವಹಿಸಿಕೊಂಡಿದ್ದಾರೆ. ಮುಖ್ಯ ಚುನಾವಣಾ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ನಂತರ ಜನರಿಗೆ ನೀಡಿದ ಸಂದೇಶದಲ್ಲಿ, ರಾಷ್ಟ್ರ ನಿರ್ಮಾಣದ ಮೊದಲ ಹೆಜ್ಜೆ ಮತದಾನ ಮತ್ತು ೧೮ ವರ್ಷಗಳನ್ನು ಪೂರ್ಣಗೊಳಿಸಿದ ಭಾರತದ ಪ್ರತಿಯೊಬ್ಬ ನಾಗರಿಕನು ಮತದಾರರಾಗಬೇಕು. ಜತೆಗೆ ಎಂದಿಗೂ ಮತ ಚಲಾಯಿಸಬೇಕು ಎಂದು ಕುಮಾರ್ ಹೇಳಿದ್ದಾರೆ.

ಭಾರತದ ಸಂವಿಧಾನ, ಚುನಾವಣಾ ಕಾನೂನುಗಳು, ನಿಯಮಗಳು ಮತ್ತು ಸೂಚನೆಗಳ ಪ್ರಕಾರ, ಚುನಾವಣಾ ಆಯೋಗವು ಮತದಾರರೊಂದಿಗಿದೆ ಮತ್ತು ಎಂದಿಗೂ ಇರುತ್ತದೆ ಎಂದು ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ.

ಧ್ವನಿ: ಜ್ಞಾನೇಶ್ ಕುಮಾರ್, ಮುಖ್ಯಾ ಚುನಾವಣಾ ಆಯುಕ್ತ ( ೨೧ ಸೆಕೆಂಡ್)

***************

ವಿದೇಶಾಂಗ ವ್ಯವಹಾರ ಸಚಿವ ಡಾ.ಎಸ್.ಜೈಶಂಕರ್ ಎರಡು ದಿನಗಳ ಕಾಲ ದಕ್ಷಿಣ ಆಫ್ರಿಕಾ ಭೇಟಿ ಕೈಗೊಂಡಿದ್ದಾರೆ. ಜೊಹಾನ್ಸ್‌ಬರ್ಗ್‌ನಲ್ಲಿ ನಾಳೆ ನಡೆಯಲಿರುವ ಜಿ-೨೦ ವಿದೇಶಾಂಗ ವ್ಯವಹಾರಗಳ ಸಚಿವರುಗಳ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಜಿ-೨೦ ದೇಶಗಳ ಜತೆಗೆ ಭಾರತ ಸಂಬಂಧ ಮತ್ತಷ್ಟು ಬಲ ಪಡಿಸುವುದು ಮತ್ತು ಗ್ಲೋಬಲ್ ಸೌತ್‌ನಲ್ಲಿ ಭಾರತ ಧ್ವನಿಯನ್ನು ಪುಷ್ಟೀಕರೀಸುವುದು ಇದರ ಮುಖ್ಯ ಉದ್ದೇಶವಾಗಿದ್ದು, ಇದೇ ವೇಳೆ ಇತರ ದೇಶಗಳ ಸಹವರ್ತಿಗಳ ಜೊತೆಗೆ ದ್ವಿಪಕ್ಷೀಯ ಮಾತುಕತೆ ನಡೆಸುವ ಸಾಧ್ಯತೆ ಇದೆ.

****************

ಪಾಕಿಸ್ತಾನ ಭಯೋತ್ಪಾದನೆಯ ಜಾಗತಿಕ ಕೇಂದ್ರಬಿಂದುವಾಗಿದ್ದು, ವಿಶ್ವಸಂಸ್ಥೆಯಲ್ಲಿ ಪಟ್ಟಿ ಮಾಡಲಾದ ಭಯೋತ್ಪಾದಕ ಸಂಸ್ಥೆಗಳಿಗೆ ಆಶ್ರಯ ನೀಡಿದೆ ಎಂದು ವಿಶ್ವಸಂಸ್ಥೆ ಭದ್ರತಾ ಮಂಡಳಿಯಲ್ಲಿ ಭಾರತ ಪಾಕಿಸ್ತಾನದ ನಡೆಯನ್ನು ತೀವ್ರವಾಗಿ ಖಂಡಿಸಿದೆ.

ಭಯೋತ್ಪಾದನೆಯ ಜಾಗತಿಕ ಕೇಂದ್ರಬಿಂದುವಾಗಿದ್ದರೂ ಇಸ್ಲಾಮಾಬಾದ್ ಭಯೋತ್ಪಾದನೆಯ ವಿರುದ್ಧ ಹೋರಾಡುವಲ್ಲಿ ಮುಂಚೂಣಿಯಲ್ಲಿದೆ ಎಂದು ಹೇಳಿಕೊಳ್ಳುತ್ತಿರುವುದು ವಿಪರ್ಯಾಸ ಎಂದು ಭಾರತ ಹೇಳಿದೆ.

ವಿಶ್ವಸಂಸ್ಥೆಯಲ್ಲಿ ಪಟ್ಟಿ ಮಾಡಲಾದ ೨೦ ಕ್ಕೂ ಹೆಚ್ಚು ಭಯೋತ್ಪಾದಕ ಸಂಸ್ಥೆಗಳಿಗೆ ಪಾಕಿಸ್ತಾನ ಆಶ್ರಯ ನೀಡಿದೆ ಮತ್ತು ಗಡಿಯಾಚೆಗಿನ ಭಯೋತ್ಪಾದನೆ ಬೆಂಬಲವನ್ನು ಒದಗಿಸುತ್ತಿದೆ ಎಂದು ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್ ನಿನ್ನೆ ಭದ್ರತಾ ಮಂಡಳಿಯಲ್ಲಿ ಹೇಳಿದ್ದಾರೆ.

****************

ನವದೆಹಲಿಯಲ್ಲಿ ಇಂದು ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ನೂತನವಾಗಿ ಆಯ್ಕೆಯಾಗಿರುವ ಎಲ್ಲ ಬಿಜೆಪಿ ಶಾಸಕರು ಹಾಗೂ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ದೆಹಲಿಯ ನೂತನ ಮುಖ್ಯಮಂತ್ರಿ ಆಯ್ಕೆ ವಿಚಾರ ಸಭೆಯಲ್ಲಿ ಅಂತಿಮಗೊಳ್ಳುವ ಸಾಧ್ಯತೆಗಳಿವೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಮುಂದಿನ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭ ರಾಷ್ಟ್ರ ರಾಜಧಾನಿಯ ರಾಮಲೀಲ ಮೈದಾನದಲ್ಲಿ ಗುರುವಾರ ನಡೆಯುವ ನಿರೀಕ್ಷೆಯಿದೆ. ಒಟ್ಟು ೭೦ ಸದಸ್ಯ ಬಲದ ದೆಹಲಿಯ ವಿಧಾನಸಭೆಗೆ ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ೪೮ ಸ್ಥಾನಗಳಲ್ಲಿ ಭರ್ಜರಿ ಗೆಲುವು ಸಾಧಿಸಿತ್ತು.

****************

ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ವಡೋದರಾದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

ಗುಜರಾತ್‌ನ ವಡೋದರಾದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ, ಗುಜರಾತ್ ಜೈಂಟ್ಸ್ ತಂಡದ ವಿರುದ್ಧ ೫ ವಿಕೆಟ್‌ಗಳಿಂದ ಜಯ ಸಾಧಿಸಿದೆ.

****************

ಒಂಬತ್ತನೇ ಆವೃತ್ತಿಯು ಐಸಿಸಿ ಚಾಂಪಿಯನ್ಸ್ ಟ್ರೋಫಿ ೨೦೨೫ ಇಂದಿನಿಂದ ಆರಂಭವಾಗಲಿದ್ದು, ಆತಿಥೇಯ ಪಾಕಿಸ್ತಾನ ತಂಡ ಕರಾಚಿಯಲ್ಲಿ ಇಂದು ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೨:೩೦ ಕ್ಕೆ ಆರಂಭವಾಗಲಿದೆ.

ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡವು ನಾಳೆ ದುಬೈ ಅಂತರರಾಷ್ಟ್ರೀಯ ಕ್ರೀಡಾಂಗಣದಲ್ಲಿ ಬಾಂಗ್ಲಾದೇಶ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ.

ಎಂಟು ಅಗ್ರ ಶ್ರೇಯಾಂಕಿತ ಏಕದಿನ ಅಂತರರಾಷ್ಟ್ರೀಯ ತಂಡಗಳನ್ನು ಒಳಗೊಂಡ ಈ ಪಂದ್ಯಾವಳಿಯು ಪಾಕಿಸ್ತಾನ ಮತ್ತು ಯುಎಇ ಯಲ್ಲಿ ನಡೆಯಲಿದೆ. ಮುಂದಿನ ತಿಂಗಳು ೯ ರಂದು ಫೈನಲ್ ಪಂದ್ಯ ನಡೆಯಲಿದೆ.

ಎ ಗುಂಪಿನಲ್ಲಿ, ನ್ಯೂಜಿಲೆಂಡ್ ಭಾರತ, ಬಾಂಗ್ಲಾದೇಶ ಮತ್ತು ಆತಿಥೇಯ ಪಾಕಿಸ್ತಾನವನ್ನು ತಂಡಗಳಿವೆ.  ಬಿ ಗುಂಪಿನಲ್ಲಿ ಅಫ್ಘಾನಿಸ್ತಾನ, ಆಸ್ಟ್ರೇಲಿಯಾ, ಇಂಗ್ಲೆಂಡ್ ಮತ್ತು ದಕ್ಷಿಣ ಆಫ್ರಿಕಾವನ್ನು ತಂಡಗಳಿವೆ.

********ಮುಕ್ತಾಯ*******